**ವಿಧಾನ ಪರಿಷತ್ ಸದಸ್ಯರುಗಳಾದ ಶ್ರೀ.ಮರಿತಿಬ್ಬೇಗೌಡ, ಶ್ರೀ. ಎಸ್. ಎಲ್. ಭೋಜೇಗೌಡ ಮತ್ತು ಶ್ರೀ. ಮಧು ಜಿ ಮಾದೇಗೌಡ ರವರ ನಿಯಮ 330 ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ಸಮಾಜ ಕಲ್ಯಾಣ ಇಲಾಖೆಯಡಿಯ ಕ್ರೈಸ್ ಅಧೀನದ ಎಸ್.ಸಿ./ಎಸ್.ಟಿ./ಬಿ.ಸಿ. ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್, ಪಾಠೋಪಕರಣ, ಕಂಪ್ಯೂಟರ್, ಪ್ರಯೋಗಾಲಯ ಪರಿಕರಗಳನ್ನು ಸಕಾಲದಲ್ಲಿ ಒದಗಿಸದೆ ಇರುವುದು, ಖಾಯಂ ಸಿಬ್ಬಂದಿಗಳಿಗೆ ಡಿ.ಸಿ.ಆರ್.ಜಿ, ಜ್ಯೋತಿ ಸಂಜೀವಿನಿ ಸೌಲಭ್ಯ ನೀಡದೆ ಇರುವುದು, ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು, ಪದವಿ ಪೂರ್ವ ಕಾಲೇಜುಗಳಲ್ಲಿ ಹಿಂದಿ ಉಪನ್ಯಾಸಕರ, ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಸೃಜನೆ, ನವೋದಯ ಮಾದರಿಯಲ್ಲಿ ಸಿಬ್ಬಂದಿಗಳಿಗೆ ಉಚಿತ ವಿದ್ಯುತ್/ವಸತಿ ಗೃಹ, ಶೇ.10% ರಷ್ಟು ವಿಶೇಷ ಭತ್ಯೆ ನೀಡದೆ ಇರುವುದು. ಶಿಕ್ಷಕ/ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡದೆ ಇರುವುದು, ಕ್ರೈಸ್ ಶಿಕ್ಷಕರಿಗೆ ಟಿ.ಇ.ಟಿ. ಕಡ್ಡಾಯ ಮಾಡಿರುವುದು ಹಾಗೂ ಪರೀಕ್ಷಾ ವೆಚ್ಚಕ್ಕಾಗಿ ರೂ. 20,153/-ಗಳನ್ನು ಸಂದಾಯ ಮಾಡಲು ಆದೇಶಿಸಿರುವುದು, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಏಕಲವ್ಯ ಮಾದರಿ ವಸತಿ ಶಾಲೆಗಳ ಮಾದರಿಯಲ್ಲಿ ಹುದ್ದೆಗಳನ್ನು ಸೃಜಿಸದೆ ಇರುವುದು, ಹೋಬಳಿಗೊಂದು ವಸತಿ ಶಾಲೆ ಪ್ರಾರಂಭಿಸದೆ ಇರುವುದು ಹಾಗೂ ವಸತಿ ಶಿಕ್ಷಣ ನಿರ್ದೇಶನಾಲಯ ಸ್ಥಾಪನೆ ಮಾಡಿರುವುದಿಲ್ಲ. ಈ ಎಲ್ಲಾ ಮೂಲಭೂತ ಸಮಸ್ಯೆಗಳಿಂದ ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇವೆ.

**ಉತ್ತರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಹಿಂದುಳಿದ ವರ್ಗಗಳ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಸಮವಸ್ತ್ರ , ಶೂ, ಸಾಕ್ಸ್ ಒದಗಿಸಲಾಗಿದೆ. ಪಾಠೋಪಕರಣ, ಕಂಪ್ಯೂಟರ್, ಪ್ರಯೋಗಾಲಯ ಪರಿಕರಗಳ ಸೌಲಭ್ಯಗಳನ್ನು ಒದಗಿಸಲು ಪ್ರತ್ಯೇಕವಾಗಿ ಯಾವುದೇ ಅನುದಾನ ನಿಗಧಿಪಡಿಸಿರುವುದಿಲ್ಲ. 2024-25 ನೇ ಸಾಲಿನ ಆಯವ್ಯಯದಲ್ಲಿ ಅನುದಾನ ಪ್ರಸ್ತಾಪಿಸಿ, ಅನುದಾನ ಲಭ್ಯತೆ ಆಧಾರದ ಮೇಲೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುವುದು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಧ ಅಧೀನದಲ್ಲಿ ಪರಿಶಿಷ್ಟ ಜಾತಿ- 503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 6403 ಖಾಯಂ ಬೋಧಕ/ಬೋದಕೇತರ ಸಿಬ್ಬಂದಿಗಳು ಕರ್ತವ್ಯನಿರ್ವಹಿಸುತ್ತಿದ್ದಾರೆ. ಸದರಿ ಖಾಯಂ ಸಿಬ್ಬಂದಿಗಳಿಗೆ ಸಂಬಂಧಿಸಿದ ಸೇವಾ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.

**ಡಿ. ಸಿ. ಆರ್. ಜಿ :**

6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018, ದಿ: 23.06.2018 ರ

--2

ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದುದರಿಂದ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.

ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ.

**ಜ್ಯೋತಿ ಸಂಜೀವಿನಿ :-**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲು ವಾರ್ಷಿಕವಾಗಿ ಅಂದಾಜು ರೂ.4.55 ಕೋಟಿ ವೆಚ್ಚದಲ್ಲಿ ಭರಿಸುವ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಶೇ.10 ರಷ್ಟು ಕ್ಯಾಂಪಸ್ ವಿಶೇಷ ಭತ್ಯೆ:-**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ಶೇ 10 ರಷ್ಟು ವಿಶೇಷ ಕ್ಯಾಂಪಸ್ ಭತ್ಯೆಯನ್ನು ಮಂಜೂರು ಮಾಡುವ ಬಗ್ಗೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಆರ್ಥಿಕ ಇಲಾಖೆಯು ವೇತನ ಆಯೋಗ ಅಥವಾ ತಜ್ಞರ ಸಮಿತಿಗಳ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ. ರಾಜ್ಯ ಸರ್ಕಾರವು ತನ್ನ ನೌಕರರಿಗೆ ಕೇಂದ್ರ ಸರ್ಕಾರದ ರೀತ್ಯ ವೇತನ ಪರಿಷ್ಕರಣೆ ಮಾಡಿರುವದಿಲ್ಲ ಇದೊಂದು ಹೊಸದಾದ ಕ್ಯಾಂಪಸ್ ವಿಶೇಷ ಭತ್ಯೆಯಾಗಿದ್ದು, ಪ್ರಸಕ್ತ 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ. ಆದ್ದರಿಂದ ಖಾಯಂ ಸಿಬ್ಬಂದಿಗಳಿಗೆ ಶೇ.10 ರಷ್ಟು ವಿಶೇಷ ಕ್ಯಾಂಪಸ್ ಭತ್ಯೆಯನ್ನು ಮಂಜೂರು ಮಾಡುವಂತೆ ಕೋರಿ 7ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

**ಹಿಂದಿ ಭಾಷಾ ಉಪನ್ಯಾಸಕರ ಹುದ್ದೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ (Science Method) ತರಗತಿಗಳನ್ನು ನಡೆಸಲಾಗುತ್ತಿದ್ದು ಸಂಘದ ವಿಜ್ಞಾನ ಕಾಲೇಜುಗಳಿಗೆ ಕನ್ನಡ ಮತ್ತು ಆಂಗ್ಲಭಾಷಾ ವಿಷಯವನ್ನು ನಿಗಧಿಪಡಿಸಿ ಹುದ್ದೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಹಿಂದಿ ವಿಷಯವನ್ನು ಭಾಷೆಯನ್ನಾಗಿ ಪರಿಗಣಿಸಿರುವುದಿಲ್ಲ. ಆದ್ದರಿಂದ ಹಿಂದಿ ಭಾಷಾ ಉಪನ್ಯಾಸಕರ ಹುದ್ದೆ ಮಂಜೂರಾಗಿರುವುದಿಲ್ಲ.

**ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ**

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿರುವುದಿಲ್ಲ ಸಂಘದ ಪದವಿ ಪೂರ್ವ ಕಾಲೇಜುಗಳಿಗೂ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಿರುವುದಿಲ್ಲ.

**ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ ಹುದ್ದೆ ಸೃಜನೆ.**

ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು 6 ರಿಂದ 12 ನೇ ತರಗತಿಯವರೆಗೆ ಮಂಜೂರಾಗಿ 11 ಮತ್ತು 12 ನೇ ತರಗತಿಗಳು ವಿಜ್ಞಾನ (Science Method) ತರಗತಿಗಳನ್ನು ನಡೆಸಲಾಗುತ್ತಿದ್ದು, ಪ್ರತಿ ಶಾಲೆಗೆ ರಾಜ್ಯ ಸರ್ಕಾರವು 50 ಹುದ್ದೆಗಳನ್ನು ಮಂಜೂರು ಮಾಡಿರುತ್ತದೆ. ಏಕಲವ್ಯ ಮಾದರಿ ವಸತಿ ಶಾಲೆಗಳು 6 ರಿಂದ 12 ನೇ ತರಗತಿಯವರೆಗೆ ಮಂಜೂರಾಗಿ 11 ಮತ್ತು 12 ನೇ ತರಗತಿಗಳು ವಿಜ್ಞಾನ (science method) ತರಗತಿಗಳನ್ನು ಹಾಗೂ ವಾಣಿಜ್ಯ ತರಗತಿಗಳನ್ನು ನಡೆಸಲಾಗುತ್ತಿದ್ದು, ಪ್ರತಿ ಶಾಲೆಗೆ 60 ಹುದ್ದೆಗಳನ್ನು ಕೇಂದ್ರ ಸರ್ಕಾರದ NESTS ವತಿಯಿಂದ ಮಂಜೂರಾಗಿರುವ ಹುದ್ದೆಗಳನ್ನು ಪರಿಗಣಿಸಲಾಗಿರುತ್ತದೆ.

**ಉಚಿತ ವಿದ್ಯುತ್ ಸೌಲಭ್ಯ**

ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:02-11-2023ರ ಟ್ವಿಟರ್ ಖಾತೆಯಲ್ಲಿ ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಕಲ್ಪಿಸಲು ಸೂಚಿಸಿರುವಂತೆ ಸಂಘದ ವಸತಿ ಶಾಲೆ/ಕಾಲೇಜುಗಳಿಗೂ ಸಹ ಈ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

**ಟಿ.ಇ.ಟಿ. ಪರೀಕ್ಷೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಸೇವಾ ಕೃಪಾಂಕದ ಮೂಲಕ ಆಯ್ಕೆಯಾದ ಮಾನ್ಯ ಉಚ್ಚನ್ಯಾಯಾಲಯದ ಆದೇಶದಂತೆ ನೇಮಕಾತಿ ಆದೇಶ ಪಡೆದು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ವಸತಿ ಶಾಲೆಯ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಹಾಗೂ ಶೈಕ್ಷಣಿಕ ಗುಣಮಟ್ಟವನ್ನು ಕಾಪಾಡಿಕೊಳ್ಳುವ ಉದ್ದೇಶದಿಂದ ಪರಿವೀಕ್ಷಣಾ ಅವಧಿಯನ್ನು ಘೋಷಿಸುವ ಮುನ್ನ ಟಿ.ಇ.ಟಿ. ಪರೀಕ್ಷೆಯನ್ನು ಅರ್ಹತಾ ಮಾನದಂಡವಾಗಿ ಪರಿಗಣಿಸಿ, ಷರತ್ತು ಬದ್ಧ ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಸದರಿ ಶಿಕ್ಷಕರುಗಳಿಗೆ ಟಿ.ಇ.ಟಿ. ಪರೀಕ್ಷಾ ತಯಾರಿಗಾಗಿ ಸಂಘದ ವತಿಯಿಂದಲೇ ಸಾರ್ವಜನಿಕ ಶಿಕ್ಷಣ ಇಲಾಖೆಯ ವತಿಯಿಂದ ತರಬೇತಿಯನ್ನು ಆಯೋಜಿಸಿ, ವಿಶೇಷ ಟಿ.ಇ.ಟಿ. ಪರೀಕ್ಷೆಯನ್ನು ಏರ್ಪಡಿಸಲು ಕ್ರಮವಹಿಸಲಾಗುತ್ತಿದೆ.

**ವಸತಿ ಶಿಕ್ಷಣ ನಿರ್ದೇಶನಾಲಯ ರಚನೆ**

ಕರ್ನಾಟಕ ರಾಜ್ಯದ ಗ್ರಾಮೀಣ ಪ್ರತಿಭಾನ್ವಿತ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಗುಣಮಟ್ಟ ಶಿಕ್ಷಣ ನೀಡಲು ಜವಹಾರ್ ನವೋದಯ ವಸತಿ ಶಾಲೆಗಳ ಮಾದರಿಯಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸಲು ಹಾಗೂ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಇಲಾಖೆಗಳ ಅಧೀನದ ವಸತಿ ಶಾಲೆಗಳನ್ನು ಒಂದೇ ಸೂರಿನಡಿ ನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ: ಸಕಇ 532 ಎಸ್ ಇ ಡಬ್ಲ್ಯೂ 96, ದಿನಾಂಕ:06-10-1999 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಿ ಆದೇಶಿಸಿದೆ.

ಪ್ರಾರಂಭದಲ್ಲಿ ವಿವಿಧ ಇಲಾಖೆಗಳ ಒಟ್ಟು 79 ವಸತಿ ಶಾಲೆಗಳು ಸಂಘಕ್ಕೆ ವರ್ಗಾವಣೆಯಾಗಿದ್ದು, ವಸತಿ ಶಾಲೆ/ಕಾಲೇಜುಗಳು ಮಂಜೂರಾಗಿದ್ದು, ಪ್ರಸ್ತುತ ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 2.16 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.

ವಸತಿ ಶಾಲೆ/ಕಾಲೇಜುಗಳ ಸಮರ್ಪಕ ನಿರ್ವಹಣೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಂಘವು ಶ್ರಮಿಸುತ್ತಿದೆ. ಪ್ರಾರಂಭದಿಂದಲೂ ಪ್ರಸ್ತುತ ಶೈಕ್ಷಣಿಕ ಸಾಲಿನವರೆವಿಗೂ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿ ಫಲಿತಾಂಶವು ಅತ್ಯುತ್ತಮವಾಗಿ ಬರುತ್ತಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಒಂದು ಬೃಹತ್ ಸಂಸ್ಥೆಯಾಗಿದ್ದು, ಸಾರ್ವಜನಿಕ ಸಂಪರ್ಕಕ್ಕೆ ಮತ್ತು ವಿದ್ಯಾರ್ಥಿಗಳ ಗುಣಮಟ್ಟದ ವಿದ್ಯಾಭ್ಯಾಸಕ್ಕೆ ಉತ್ತಮ ವಾತಾವರಣ ಕಲ್ಪಿಸಿಕೊಡಲಾಗಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಪ್ರಸ್ತಾವನೆ, ಪ್ರಸ್ತುತ ಪರಿಶೀಲನೆಯಲ್ಲಿರುತ್ತದೆ.

**ಹೋಬಳಿಗೊಂದು ವಸತಿ ಶಾಲೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳು ಇಲ್ಲದಿರುವ ಹೋಬಳಿಯಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. ಪ್ರತಿ ಒಂದು ವಸತಿ ಶಾಲೆಯನ್ನು ಪ್ರಾರಂಭಿಸಲು ಆವರ್ತಕ ಮತ್ತು ಅನಾವರ್ತಕ ವೆಚ್ಚ ಸೇರಿ ರೂ.24,17,86,711/-ಗಳ ವೆಚ್ಚ ಭರಿಸಬೇಕಾಗಿರುತ್ತದೆ. ಆರ್ಥಿಕ ಇಲಾಖೆಯ ಸಹಮತಿ ಪಡೆದು, ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ವಸತಿ ಶಾಲೆಯನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.

ಸಕಇ-ಎಂಡಿಎಸ್/227/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು